ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ಸೋಮವಾರ, ದಿನಾಂಕ: 02ನೇ ಮಾರ್ಚ್, 2020

ಬೀದರ್ ಬ್ರಿಮ್ಸ್ ಮಹಾವಿದ್ಯಾಲಯದಲ್ಲಿ ನಡೆದ ಅವ್ಯವಹಾರದ ಬಗ್ಗೆ

ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)

12 (49) ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೀದರ್‌ನ ಬ್ರಿಮ್ಸ್ ಮಹಾವಿದ್ಯಾಲಯದಲ್ಲಿ ನಡೆದಿದೆ ಎನ್ನಲಾದ ಸುಮಾರು 18.00 ಕೋಟಿ ರೂಪಾಯಿ ಅವ್ಯವಹಾರ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಯಾವ ಕ್ರಮಕೈಗೊಳ್ಳಲಾಗಿದೆ ;

(ಆ) ಬೀದರ್ ಬ್ರಿಮ್ಸ್‌ನಲ್ಲಿ ನಡೆದ ಅವ್ಯವಹಾರಕ್ಕೆ ಕಾರಣರಾದವರು ಎನ್ನಲಾದ ಎರವಲು ಬಂದ ಗುಮಾಸ್ತರ ವಿರುದ್ಧ ಸರ್ಕಾರ ತೆಗೆದುಕೊಂಡ ಕ್ರಮ ಏನು; ಈ ಎರವಲು ಬಂದ ಗುಮಾಸ್ತರು ಅದೇ ಸ್ಥಳದಲ್ಲಿ ಮುಂದುವರೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ನಿಲುವು ಏನು;

(ಇ) ಬೀದರ್ ಬ್ರಿಮ್ಸ್‌ನಲ್ಲಿ ನಡೆದಿದೆ ಎನ್ನಲಾದ ಸುಮಾರು 18.00 ಕೋಟಿ ರೂಪಾಯಿ ತನಿಖೆ ಎಸಿಬಿ ಬೀದರ್‌ಗೆ ವಹಿಸಲಾಗಿದ್ದರೂ ಇದೂವರೆಗೆ ಏಕೆ ಕಾರ್ಯಪ್ರವೃತ್ತರಾಗಿಲ್ಲ ; ಅದಕ್ಕಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳಾವುವು?